ಕರ್ನಾಟಕ ಸರ್ಕಾರ
# ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿ
ಮಲ್ಲೇಶ್ವರಂ 6ನೇ ಅಡ್ಡರಸ್ತೆ, ಬೆಂಗಳೂರು

**Email Id: adpisvsection@gmail.com** **Phone No:080-23310075/76**

ಸಂಖ್ಯೆ:ಎಸ್1/ವಾ.ಪ.ಮೌ.ನೋಂ/34/2023-24 ದಿನಾಂಕ: 01.01.2024

## ಸುತ್ತೋಲೆ

**ವಿಷಯ:** ವಾಣಿಜ್ಯ ಪರೀಕ್ಷೆಯ ಉತ್ತರ ಪತ್ರಿಕೆಗಳ ಮೌಲ್ಯಮಾಪನ ಕಾರ್ಯಕ್ಕಾಗಿ ಆನ್‌ಲೈನ್‌ನಲ್ಲಿ ಮೌಲ್ಯಮಾಪಕರ ನೋಂದಣಿ ಅವಧಿ ವಿಸ್ತರಣೆ ಮಾಡಿರುವ ಬಗ್ಗೆ.

**ಉಲ್ಲೇಖ:** ಕರ್ನಾಟಕ ರಾಜ್ಯ ಬೆರಳಚ್ಚು, ಶೀಘ್ರಲಿಪಿ ಮತ್ತು ಗಣಕಯಂತ್ರ ವಿದ್ಯಾಶಾಲೆಗಳ ಸಂಘ(ರಿ)ರವರ ಪತ್ರ ಸಂಖ್ಯೆ:KSTSCIA/18/23-24. ದಿನಾಂಕ:30.12.2023

*************

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ ವಾಣಿಜ್ಯ ಪರೀಕ್ಷೆಯ ಉತ್ತರ ಪತ್ರಿಕೆಗಳ ಮೌಲ್ಯಮಾಪನ ಕಾರ್ಯಕ್ಕಾಗಿ ಆನ್‌ಲೈನ್‌ನಲ್ಲಿ ವಾಣಿಜ್ಯ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪ್ರಾಂಶುಪಾಲರು, ಬೋಧಕರು ಹಾಗೂ ಸರ್ಕಾರಿ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ನೌಕರರು ಮೌಲ್ಯಮಾಪನ ಕಾರ್ಯಕ್ಕಾಗಿ ನೋಂದಣಿ ಮಾಡಿಕೊಳ್ಳಲು ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿಯ ಜಾಲತಾಣದಲ್ಲಿ ದಿನಾಂಕ:07.11.2023 ರಿಂದ ದಿನಾಂಕ:31.12.2023 ಅವಕಾಶ ಕಲ್ಪಿಸಿದ್ದು, ಬೆರಳಚ್ಚು, ಶೀಘ್ರಲಿಪಿ ಮತ್ತು ಗಣಕಯಂತ್ರ ಪರೀಕ್ಷೆಗೆ ಅರ್ಜಿ ಸಲ್ಲಿಸುವ ಕಾರ್ಯದಲ್ಲಿ ವಿದ್ಯಾಶಾಲೆಯ ಪ್ರಾಚಾರ್ಯರು ಹಾಗೂ ಬೋಧಕರು ತೊಡಗಿದ್ದರಿಂದ ನೋಂದಣಿ ಮಾಡಲು ಸಾಧ್ಯವಾಗದೇ ಇರುವ ಕಾರಣ ಉಲ್ಲೇಖಿತ ಪತ್ರದಲ್ಲಿ ಹದಿನೈದು ದಿನಗಳ ವರೆಗೆ ಕಾಲಾವಕಾಶ ಕೋರಿ ಜನವರಿ:16.01.2024ರ ವರೆಗೆ ಅವಧಿ ವಿಸ್ತರಣೆ ಮಾಡಲು ಮನವಿ ಸಲ್ಲಿಸಿರುತ್ತಾರೆ.

ಸದರಿ ಮನವಿದಾರರ ಕೋರಿಕೆಯಂತೆ ಮೌಲ್ಯಮಾಪಕರ ನೋಂದಣಿಗಾಗಿ ಅರ್ಜಿ ಸಲ್ಲಿಸಲು ದಿನಾಂಕ: **01-01-2024** ರಿಂದ ದಿನಾಂಕ: **16-01-2024**ರ ವರೆಗೆ ಅವಧಿ ವಿಸ್ತರಣೆ ಮಾಡಿ ಅವಕಾಶ ನೀಡಲಾಗಿದೆ.

1/1/2024.
(ಹೆಚ್.ಎನ್. ಗೋಪಾಲಕೃಷ್ಣ)
ನಿರ್ದೇಶಕರು (ಪರೀಕ್ಷೆಗಳು)

ಪ್ರತಿಯನ್ನು:

1.ಬೆಂಗಳೂರು, ಮೈಸೂರು, ಕಲಬುರಗಿ ಹಾಗೂ ಬೆಳಗಾವಿ ವಿಭಾಗದ ಸಹನಿರ್ದೇಶಕರು ಹಾಗೂ ಪದನಿಮಿತ್ತ ವಿಭಾಗೀಯ ಕಾರ್ಯದರ್ಶಿಗಳಿಗೆ ಸೂಕ್ತ ಕ್ರಮಕ್ಕಾಗಿ.

2. ರಾಜ್ಯ ಎಲ್ಲಾ ಡಯಟ್ ಪ್ರಾಂಶುಪಾಲರಿಗೆ ಮಾಹಿತಿಗಾಗಿ.
3. ಸಂಬಂಧಿಸಿದ ವಾಣಿಜ್ಯ ಸಂಸ್ಥೆಗಳ ಪ್ರಾಂಶುಪಾಲರುಗಳಿಗೆ ಅಗತ್ಯ ಕ್ರಮಕ್ಕಾಗಿ.
4. ಕಛೇರಿ ಪ್ರತಿ.